# Akashvani : Bangalore
# National Bulletin In Kannada
# 18.06.2024 / 19.35 hrs

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**18.06.2024 / 19.35 hrs**

**<><*<><>*><>**

<u>ಮುಖ್ಯಾಂಶಗಳು</u>

೧. ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿ ೯ ಕೋಟಿ ೨೬ ಲಕ್ಷ ರೈತರ ಖಾತೆಗಳಿಗೆ ೨೦ ಸಾವಿರ ಕೋಟಿ ರೂಪಾಯಿ ವರ್ಗಾವಣೆ

೨. ಶ್ರೀನಗರದಲ್ಲಿ ಇದೇ ೨೧ ರಂದು ನಡೆಯಲಿರುವ ಅಂತಾರಾಷ್ಟ್ರೀಯ ಯೋಗದಿನಾಚರಣೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗಿ

೩. ಪ್ರತಿಷ್ಠಿತ ನೆಲ್ಸನ್ ಮಂಡೇಲ ಜೀವಮಾನ ಸಾಧನೆ ಪ್ರಶಸ್ತಿಗೆ ಭಾಜನರಾದ ಚಲನಚಿತ್ರ ನಿರ್ಮಾಪಕ ವಿನೋದ್ ಗಣತ್ರ

೪. ಭಾರತದ ಗ್ರ್ಯಾಂಡ್ ಮಾಸ್ಟರ್ ಅರ್ಜುನ್ ಎರಿಗಾಸಿ ಅವರಿಗೆ ಸ್ಟೀಫನ್ ಅವಗ್ಯಾನ್ ಸ್ಮಾರಕ ಪ್ರಶಸ್ತಿ ಗರಿ

**<><*<><>*><>**

ಪ್ರಧಾನಮಂತ್ರಿ ನರೇಂದ್ರ ಮೋದಿ ಇಂದು ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿ ೯ ಕೋಟಿ ೨೬ ಲಕ್ಷ ರೈತರ ಖಾತೆಗೆ ೨೦ ಸಾವಿರ ಕೋಟಿ ರೂಪಾಯಿ ಹಣವನ್ನು ವರ್ಗಾವಣೆ ಮಾಡಿದರು. ಉತ್ತರ ಪ್ರದೇಶದ ವಾರಾಣಸಿಯಲ್ಲಿ ಇಂದು ಸಂಜೆ ನಡೆದ ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ಸಮ್ಮೇಳನದಲ್ಲಿ ಅವರು ರೈತರ ಖಾತೆಗಳಿಗೆ ನೇರವಾಗಿ ಹಣ ವರ್ಗಾವಣೆ ಮಾಡುವ ಕಾರ್ಯಕ್ಕೆ ಚಾಲನೆ ನೀಡಿದರು. ಈ ವೇಳೆ ಮಾತನಾಡಿದ ಅವರು, ಲೋಕಸಭೆ ಚುನಾವಣೆಯಲ್ಲಿ ನೀವು ನನ್ನನ್ನು ಮೂರನೇ ಬಾರಿಗೆ ಸಂಸದನಾಗಿ ಮಾತ್ರವಲ್ಲ, ಮೂರನೇ ಬಾರಿಗೆ ದೇಶದ ಪ್ರಧಾನಿಯಾಗಿ ಆಯ್ಕೆ ಮಾಡಿದ್ದೀರಿ. ನಿಮಗೆ ನನ್ನ ಧನ್ಯವಾದಗಳು ಎಂದು ಹೇಳಿದರು. ವಾರಾಣಸಿ ಕ್ಷೇತ್ರದಿಂದ ಸತತ ಮೂರನೇ ಬಾರಿಗೆ ಲೋಕಸಭೆಗೆ ಪ್ರಧಾನಿ ನರೇಂದ್ರ ಮೋದಿ ಆಯ್ಕೆಯಾಗಿದ್ದಾರೆ. ಇನ್ನೊಂದೆಡೆ, ಪ್ರಧಾನಿ ಮೋದಿಯವರು ವಾರಾಣಸಿಯ ದಶಾಶ್ವಮೇಧ ಘಾಟ್‌ನಲ್ಲಿ ಗಂಗಾ ಆರತಿ ವೀಕ್ಷಿಸಿದ್ದು, ನಂತರ ಕಾಶಿ ವಿಶ್ವನಾಥ ದೇವಸ್ಥಾನಕ್ಕೆ ಭೇಟಿ ನೀಡಿ, ವಿಶೇಷ

ಪೂಜೆಯಲ್ಲಿ ಪಾಲ್ಗೊಂಡಿದ್ದಾರೆ. ೩ನೇ ಬಾರಿಗೆ ಪ್ರಧಾನಿಯಾಗಿ ಪ್ರಮಾಣ ವಚನ ಸ್ವೀಕರಿಸಿದ ನಂತರ, ಪ್ರಧಾನಿ ನರೇಂದ್ರ ಮೋದಿ ಅವರು, ರೈತರ ಕಲ್ಯಾಣಕ್ಕಾಗಿ ಪ್ರಧಾನಮಂತ್ರಿ ಕಿಸಾನ್ ಸಮ್ಮಾನ್ ನಿಧಿ'ಯ ೧೭ನೇ ಕಂತು ಬಿಡುಗಡೆ ಮಾಡುವ ಕಡತಕ್ಕೆ ಮೊದಲು ಸಹಿ ಹಾಕಿದ್ದರು. ಅದರಂತೆ ಈಗ ರೈತರಿಗೆ ಹಣ ಬಿಡುಗಡೆ ಮಾಡಿದ್ದಾರೆ.

<><*<><>*><>

ಪ್ರಧಾನಮಂತ್ರಿಯವರು ೩೦,೦೦೦ಕ್ಕೂ ಹೆಚ್ಚು ಮಹಿಳೆಯರಿಗೆ ಸ್ವಸಹಾಯ ಗುಂಪುಗಳ ಕೃಷಿ ಸಖಿಗಳ ಪ್ರಮಾಣಪತ್ರಗಳನ್ನು ಸಹ ವಿತರಿಸಿದರು. ಕೃಷಿ ಸಖಿ ಕನ್ವರ್ಜೆನ್ಸ್ ಕಾರ್ಯಕ್ರಮವು ಗ್ರಾಮೀಣ ಮಹಿಳೆಯರನ್ನು ಸಬಲೀಕರಣಗೊಳಿಸುವ ಮೂಲಕ ಗ್ರಾಮೀಣ ಭಾರತವನ್ನು ಪರಿವರ್ತಿಸುವ ಗುರಿಯನ್ನು ಹೊಂದಿದೆ.  ಮತ್ತೊಂದೆಡೆ, ನಾಳೆ ಬೆಳಗ್ಗೆ ೯.೪೫ಕ್ಕೆ ಪ್ರಧಾನಿಯವರು ಬಿಹಾರದ ನಳಂದಾಕ್ಕೆ ಭೇಟಿ ನೀಡಲಿದ್ದಾರೆ. ಬೆಳಗ್ಗೆ ೧೦.೩೦ರ ಸುಮಾರಿಗೆ ರಾಜ್‌ಗಿರ್‌ನಲ್ಲಿರುವ ನಳಂದ ವಿಶ್ವವಿದ್ಯಾಲಯದ ಕ್ಯಾಂಪಸ್ ಅನ್ನು ಉದ್ಘಾಟಿಸಲಿದ್ದಾರೆ.  ವಿಶ್ವವಿದ್ಯಾನಿಲಯವನ್ನು ಭಾರತ ಮತ್ತು ಪೂರ್ವ ಏಷ್ಯಾ ಶೃಂಗಸಭೆ ದೇಶಗಳ ನಡುವಿನ ಜಂಟಿ ಸಹಯೋಗದಲ್ಲಿ ರೂಪಿಸಲಾಗಿದೆ. ಉದ್ಘಾಟನಾ ಸಮಾರಂಭದಲ್ಲಿ ೧೭ ದೇಶಗಳ ಮುಖ್ಯಸ್ಥರು ಸೇರಿದಂತೆ ಹಲವಾರು ಗಣ್ಯರು ಭಾಗವಹಿಸಲಿದ್ದಾರೆ.

<><*<><>*><>

ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಅವರು ನವದೆಹಲಿಯಲ್ಲಿ ಅಮೆರಿಕದ ರಾಷ್ಟ್ರೀಯ ಭದ್ರತಾ ಸಲಹೆಗಾರರಾದ ಜೇಕ್ ಸುಲ್ಲಿವಾನ್ ಅವರೊಂದಿಗೆ ಮಾತುಕತೆ ನಡೆಸಿದರು. ಕ್ರಿಟಿಕಲ್ ಮತ್ತು ಎಮರ್ಜಿಂಗ್ ಟೆಕ್ನಾಲಜಿ ಕುರಿತು ಭಾರತ-ಅಮೆರಿಕ  ಉಪಕ್ರಮದ ಎರಡನೇ ಸಭೆಯ ಅಧ್ಯಕ್ಷತೆ ವಹಿಸಿದ್ದರು. ಸಹ-ಉತ್ಪಾದನೆ, ಸಹ-ಅಭಿವೃದ್ಧಿ ಮತ್ತು ಸಂಶೋಧನೆ ಮತ್ತು ಅಭಿವೃದ್ಧಿ ಅವಕಾಶಗಳ ಮೇಲೆ ಕೇಂದ್ರೀಕರಿಸುವ ಮೂಲಕ ಮತ್ತು ಸಮಾನ ಮನಸ್ಕ ರಾಷ್ಟ್ರಗಳೊಂದಿಗೆ ಸಮನ್ವಯವನ್ನು ಹೆಚ್ಚಿಸುವ ಮೂಲಕ ಆದ್ಯತೆಯ ನಿರ್ಣಾಯಕ ಮತ್ತು ಉದಯೋನ್ಮುಖ ತಂತ್ರಜ್ಞಾನ ಕ್ಷೇತ್ರಗಳಲ್ಲಿನ ಪ್ರಗತಿಯ ಸಾಧನೆಗಳ ಸುತ್ತ ಸಹಕಾರವನ್ನು ಕೇಂದ್ರೀಕರಿಸಲು ಉಭಯ ದೇಶಗಳು ತಮ್ಮ ಬದ್ಧತೆ ವ್ಯಕ್ತಪಡಿಸಿವೆ. ತಂತ್ರಜ್ಞಾನ ಸಂರಕ್ಷಣಾ ಟೂಲ್‌ಕಿಟ್‌ಗಳನ್ನು ಅಳವಡಿಸಿಕೊಳ್ಳುವುದಕ್ಕೆ ಪ್ರಾಮುಖ್ಯತೆ ನೀಡುವುದು, ಸೂಕ್ಷ್ಮ ಮತ್ತು ದ್ವಿ-ಬಳಕೆಯ ತಂತ್ರಜ್ಞಾನಗಳ ಸೋರಿಕೆಯನ್ನು ತಡೆಯಲು ಕ್ರಮ ಕೈಗೊಳ್ಳಬೇಕಾಗಿದೆ ಎಂದು ಉಭಯ ದೇಶಗಳು ತೀರ್ಮಾನಿಸಿದವು.

<><*<><>*><>

ಅಮೆರಿಕದ ರಾಷ್ಟ್ರೀಯ ಭದ್ರತಾ ಸಲಹೆಗಾರ ಜೇಕ್ ಸುಲ್ಲಿವಾನ್ ಅವರ ಭಾರತ ಭೇಟಿಯು ಉಭಯ ದೇಶಗಳ ನಡುವಿನ ಈಗಾಗಲೇ ಬಲವಾದ ಪಾಲುದಾರಿಕೆಯನ್ನು ಇನ್ನಷ್ಟು ಹೆಚ್ಚಿಸುತ್ತದೆ ಮತ್ತು ಜಂಟಿ ಸಹಭಾಗಿತ್ವಕ್ಕೆ ಆದ್ಯತೆ ನೀಡುತ್ತದೆ ಎಂದು ಅಮೆರಿಕ ತಿಳಿಸಿದೆ. ಈ ಕುರಿತು ಪತ್ರಿಕಾಗೋಷ್ಠಿ ನಡೆಸಿದ ಶ್ವೇತಭವನದ ರಾಷ್ಟ್ರೀಯ ಭದ್ರತಾ ಸಂವಹನಗಳ ಸಲಹೆಗಾರ ಜಾನ್ ಕಿರ್ಬಿ, ಭಾರತ ಮತ್ತು ಅಮೆರಿಕ ಎರಡು ಹಳೆಯ ಮತ್ತು ದೊಡ್ಡ ಪ್ರಜಾಪ್ರಭುತ್ವ ದೇಶ ಎಂದು ತಿಳಿಸಿದರು. ಉಭಯ ದೇಶಗಳ ನಡುವಿನ ಸ್ನೇಹದ ಅನನ್ಯ ಬಂಧ ಎಂದಿಗೂ ಇರುತ್ತದೆ. ಈ ನಿಟ್ಟಿನಲ್ಲಿ ಜೇಕ್ ಸುಲ್ಲಿವಾನ್ ಅವರ ಭೇಟಿ ಇನ್ನಷ್ಟು ಚರ್ಚೆಗಳಿಗೆ ಅವಕಾಶ ಮಾಡಿಕೊಡಲಿದೆ. ಇದು ಎರಡು ರಾಷ್ಟ್ರಗಳ ನಡುವಿನ ಸಹಕಾರದ ಪ್ರಮುಖ ಕ್ಷೇತ್ರಗಳನ್ನು ವಿಸ್ತರಿಸುವುದು ಸೇರಿದಂತೆ ಹಲವು ವಿಷಯಗಳ ಕುರಿತು ಸಮಾಲೋಚನೆ ನಡೆಯುವ ನಿರೀಕ್ಷೆ ಇದೆ ಎಂದರು. ಇದಕ್ಕೂ ಮೊದಲು, ಸುಲ್ಲಿವಾನ್ ಅವರು ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಿ, ದ್ವಿಪಕ್ಷೀಯ ಸಹಕಾರದ ವಿವಿಧ ಕ್ಷೇತ್ರಗಳಲ್ಲಿನ ಪ್ರಗತಿಯ ಬಗ್ಗೆ, ವಿಶೇಷವಾಗಿ ನಿರ್ಣಾಯಕ ಮತ್ತು ಉದಯೋನ್ಮುಖ ತಂತ್ರಜ್ಞಾನಗಳ ಉಪಕ್ರಮದ ಕುರಿತು ಚರ್ಚೆ ನಡೆಸಿದರು.

<><*<><>*><>

ಇದೇ ೨೧ ರಂದು ಜಮ್ಮು-ಕಾಶ್ಮೀರದ ಶ್ರೀನಗರದಲ್ಲಿ ನಡೆಯುವ ೧೦ನೇ ಅಂತಾರಾಷ್ಟ್ರೀಯ ಯೋಗ ದಿನಾಚರಣೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ಪಾಲ್ಗೊಳ್ಳಲಿದ್ದಾರೆ. ಈ ಕುರಿತು ನವದೆಹಲಿಯಲ್ಲಿ ಸುದ್ದಿಗೋಷ್ಠಿ ನಡೆಸಿದ ಕೇಂದ್ರ ಆಯುಷ್ ಸಚಿವ ಪ್ರತಾಪ್‌ರಾವ್ ಜಾದವ್, ಸ್ವಂತಕ್ಕಾಗಿ ಹಾಗೂ ಸಮಾಜಕ್ಕಾಗಿ ಯೋಗ ಎಂಬ ಧ್ಯೇಯ ವಾಕ್ಯದಡಿ ಈ ವರ್ಷದ ಅಂತಾರಾಷ್ಟ್ರೀಯ ಯೋಗದಿನವನ್ನು ಆಚರಿಸಲಾಗುತ್ತಿದೆ. ವೈಯಕ್ತಿಕ ಮತ್ತು ಸಾಮಾಜಿಕ ಯೋಗಕ್ಷೇಮವನ್ನು ಬೆಳೆಸುವಲ್ಲಿ ಯೋಗ ಪ್ರಮುಖ ಪಾತ್ರ ವಹಿಸುತ್ತಿದೆ. ಯೋಗವು ದೈಹಿಕ, ಮಾನಸಿಕ ಮತ್ತು ಆಧ್ಯಾತ್ಮಿಕ ಬೆಳವಣಿಗೆಯ ಜೊತೆಗೆ ಸಾಮಾಜಿಕ ಸಾಮರಸ್ಯವನ್ನು ಉತ್ತೇಜಿಸುತ್ತದೆ ಎಂದು ಹೇಳಿದರು. ಇತ್ತೀಚಿನ ವರ್ಷಗಳಲ್ಲಿ ಲಕ್ಷಾಂತರ ಜನರು, ಉತ್ಸಾಹದಿಂದ ಯೋಗದಲ್ಲಿ ನಿರತರಾಗುತ್ತಿರುವುದು ಸಮುದಾಯಗಳ ಮೇಲೆ ಯೋಗದ ಆಳವಾದ ಪ್ರಭಾವವನ್ನು ಪ್ರತಿಬಿಂಬಿಸುತ್ತದೆ ಎಂದರು. ಇದೇ ವೇಳೆ ಸಚಿವರು, ಬ್ರೈನ್ ಲಿಪಿಯಲ್ಲಿ ಯೋಗ ಮಾರ್ಗಸೂಚಿ ಪುಸ್ತಕವನ್ನು ಬಿಡುಗಡೆಗೊಳಿಸಿದರು. ದೃಷ್ಟಿ ವಿಶೇಷಚೇತನರು ಯೋಗ ಕಲಿಯಲು ಮತ್ತು ಅಭ್ಯಾಸ ಮಾಡಲು ಈ ಪುಸ್ತಕ ಸಹಕಾರಿಯಾಗಿದೆ. ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ- ಇಸ್ರೋ, 'ಬಾಹ್ಯಾಕಾಶಕ್ಕಾಗಿ ಯೋಗ' ಉಪಕ್ರಮದಡಿ ಅಂತಾರಾಷ್ಟ್ರೀಯ ಯೋಗದಿನವನ್ನು ಆಚರಿಸಲಿದೆ. ಗಗನಯಾನ ಯೋಜನೆಯ ತಂಡ ಸೇರಿದಂತೆ ಇಸ್ರೋ ವಿಜ್ಞಾನಿಗಳು ಮತ್ತು ಸಿಬ್ಬಂದಿ, ಅಂದು ಯೋಗ ದಿನಾಚರಣೆಯಲ್ಲಿ ಭಾಗವಹಿಸಲಿದ್ದಾರೆ.

<><*<><>*><>

ಚಲನಚಿತ್ರ ನಿರ್ಮಾಪಕ ವಿನೋದ್ ಗಣತ್ರ, ಅವರು, ದಕ್ಷಿಣ ಆಫ್ರಿಕಾದ ಪ್ರತಿಷ್ಠಿತ ನೆಲ್ಸನ್ ಮಂಡೇಲ ಜೀವಮಾನ ಸಾಧನೆ ಪ್ರಶಸ್ತಿಗೆ ಭಾಜನರಾಗಿದ್ದಾರೆ. ವಿನೋದ್ ಗಣತ್ರ ಅವರು, ಈ ಪ್ರತಿಷ್ಠಿತ ಪ್ರಶಸ್ತಿ ಪಡೆದ ಮೊದಲ ಭಾರತೀಯರಾಗಿದ್ದು, ಮಕ್ಕಳ ಚಲನಚಿತ್ರಗಳಿಗೆ ನೀಡಿದ ಕೊಡುಗೆಗಾಗಿ ಅವರಿಗೆ ಈ ಗೌರವ ಸಂದಾಯವಾಗಿದೆ. ಪ್ರಸ್ತುತ ನಡೆಯುತ್ತಿರುವ ಏಳನೇ ನೆಲ್ಸನ್ ಮಂಡೇಲ ಮಕ್ಕಳ ಚಲನಚಿತ್ರ ಉತ್ಸವದಲ್ಲಿ ವಿನೋದ್ ಗಣತ್ರ ಅವರಿಗೆ ಪ್ರಶಸ್ತಿ ಪ್ರದಾನ ಮಾಡಲಾಗುತ್ತದೆ.

<><*<><>*><>

ಯೋಗ ಮತ್ತು ಸಿರಿಧಾನ್ಯಗಳ ಬಗ್ಗೆ ಜಾಗೃತಿ ಮೂಡಿಸುವ ಮೂಲಕ ಸಮಗ್ರ ಆರೋಗ್ಯವನ್ನು ಜನತಾ ಆಂದೋಲನವನ್ನಾಗಿ ಮಾಡುವಂತೆ ಗ್ರಾಮ ಪಂಚಾಯಿತಿ ಮುಖ್ಯಸ್ಥರಿಗೆ ಪ್ರಧಾನಿ ನರೇಂದ್ರ ಮೋದಿ ಕರೆ ನೀಡಿದ್ದಾರೆ. ಗ್ರಾಮಪಂಚಾಯಿತಿ ಪ್ರಮುಖರಿಗೆ ಬರೆದ ಪತ್ರದಲ್ಲಿ ಪಂಚಾಯತ್ ಆವರಣಗಳು, ಶಾಲೆಗಳು, ಅಂಗನವಾಡಿಗಳು, ಸಮುದಾಯ, ಆರೋಗ್ಯ ಕೇಂದ್ರಗಳು ಮತ್ತು ಇತರ ಸ್ಥಳಗಳಲ್ಲಿ ಯೋಗ ಆಧಾರಿತ ಕಾರ್ಯಕ್ರಮಗಳನ್ನು ಆಯೋಜಿಸುವಂತೆ ತಿಳಿಸಿದ್ದಾರೆ. ಜನರಿಗೆ ವಿಶೇಷವಾಗಿ ಯುವಜನರಿಗೆ ಸುಸ್ಥಿರ ಮತ್ತು ಒತ್ತಡ ಮುಕ್ತ ಜೀವನಶೈಲಿಯನ್ನು ಅಳವಡಿಸಿಕೊಳ್ಳಲು ಯೋಗ ಸಹಕಾರಿಯಾಗಿದೆ ಎಂದು ಹೇಳಿದ್ದಾರೆ.

<><*<><>*><>

ರಕ್ಷಣಾ ಉತ್ಪಾದನೆಯಲ್ಲಿ ಭಾರತದ ಸ್ವಾವಲಂಬನೆಯನ್ನು ಮತ್ತಷ್ಟು ಹೆಚ್ಚಿಸಲು ಹಾಗೂ ರಕ್ಷಣಾ ಕ್ಷೇತ್ರದಲ್ಲಿ 'ಮೇಕ್ ಇನ್ ಇಂಡಿಯಾ'ಕ್ಕೆ ಆದ್ಯತೆ ನೀಡಲು ಕೇಂದ್ರ ಸರ್ಕಾರ ಮುಂದಾಗಿದೆ. ಈ ನಿಟ್ಟಿನಲ್ಲಿ ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್ - ಎಚ್‌ಎಎಲ್ ನಿಂದ ೧೫೬ ಲಘು ಯುದ್ಧ ಹೆಲಿಕಾಪ್ಟರ್‌ಗಳ ಖರೀದಿಗಾಗಿ ರಕ್ಷಣಾ ಸಚಿವಾಲಯ ಪ್ರಸ್ತಾವನೆ ಸಲ್ಲಿಸಿದೆ. ೧೫೬ ಲಘು ಯುದ್ಧ ಹೆಲಿಕಾಪ್ಟರ್‌ಗಳ ಖರೀದಿ ಮಾಡಲಾಗುವುದು. ಭಾರತೀಯ ಸೇನೆಗೆ ೯೦ ಮತ್ತು ಭಾರತೀಯ ವಾಯುಪಡೆಗೆ ೬೬ ಹೆಲಿಕಾಫ್ಟರ್ ಖರೀದಿಸಲಾಗುವುದು ಎಂದು ರಕ್ಷಣಾ ಸಚಿವಾಲಯದ ಪ್ರಸ್ತಾವನೆಯಲ್ಲಿ ತಿಳಿಸಲಾಗಿದೆ. ಭಾರತೀಯ ವಾಯುಪಡೆ ಮತ್ತು ಭಾರತೀಯ ಸೇನೆಯು ಸ್ವಾಧೀನಪಡಿಸಿಕೊಳ್ಳುವ ಹೆಲಿಕಾಪ್ಟರ್‌ಗಳ ಒಟ್ಟು ಮೌಲ್ಯ ೪೫ ರಿಂದ ೫೦ ಸಾವಿರ ಕೋಟಿ ಮೌಲ್ಯ ಎಂದು ಅಂದಾಜಿಸಲಾಗಿದೆ. ಪ್ರಧಾನಿ ನರೇಂದ್ರ ಮೋದಿಯವರ ನಾಯಕತ್ವದಲ್ಲಿ, ರಕ್ಷಣಾ ಉತ್ಪಾದನೆಯಲ್ಲಿ ಸ್ವಾವಲಂಬನೆಯನ್ನು ಸಾಧಿಸುವತ್ತ ಗಮನಹರಿಸುವುದರೊಂದಿಗೆ ದೇಶದ ಭದ್ರತಾ ಉಪಕರಣವನ್ನು ಮತ್ತಷ್ಟು

ಬಲಪಡಿಸುವುದು ನಮ್ಮ ಗುರಿಯಾಗಿದೆ" ಎಂದು ರಕ್ಷಣಾ ಸಚಿವ ರಾಜನಾಥ್ ಸಿಂಗ್ ತಿಳಿಸಿದ್ದಾರೆ.

<><*<><>*><>

ಆಕಾಶವಾಣಿಯ ಜನಪ್ರಿಯ 'ಮನ್ ಕಿ ಬಾತ್' ಕಾರ್ಯಕ್ರಮ, ಇದೇ ತಿಂಗಳ ೩೦ ರಂದು, ೧೧೧ನೇ ಸಂಚಿಕೆ ಪ್ರಸಾರವಾಗಲಿದೆ. ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು, ತಮ್ಮ ಮನದ ಮಾತನ್ನು ದೇಶ, ವಿದೇಶಗಳ ಜನತೆಯೊಂದಿಗೆ, ಹಂಚಿಕೊಳ್ಳಲಿದ್ದಾರೆ. ಸತತ ಮೂರನೇ ಅವಧಿಗೆ ಪ್ರಧಾನಮಂತ್ರಿಯಾಗಿ, ನರೇಂದ್ರ  ಮೋದಿಯವರು ಆಯ್ಕೆಯಾದ ನಂತರ, ಪ್ರಸಾರವಾಗಲಿರುವ ಮೊದಲ ಸಂಚಿಕೆಯಾಗಿದೆ.  ಟೋಲ್‌ಫ್ರೀ ಸಂಖ್ಯೆ ೧೮೦೦-೧೧-೭೦೮೦೦ ಗೆ ಅಥವಾ ನಮೋ ಆಪ್ ಅಥವಾ ಮೈ ಜಿ.ಒ.ವಿ ಡಾಟ್ ಇನ್ ಮೂಲಕ, ಇದೇ ೨೮ ರವರೆಗೆ ಜನತೆ ತಮ್ಮ ಅನಿಸಿಕೆಗಳನ್ನು ಹಂಚಿಕೊಳ್ಳಬಹುದು.

<><*<><>*><>

ಉತ್ತರ ಭಾರತ ಮತ್ತು ಮಧ್ಯ ಭಾರತದಲ್ಲಿ ಬಿಸಿಗಾಳಿ ವಾತಾವರಣ ಮುಂದುವರೆದಿದೆ. ಮುಂದಿನ ಒಂದೆರಡು ದಿನಗಳಲ್ಲಿ ಉತ್ತರ ಪ್ರದೇಶ, ಹಿಮಾಚಲ ಪ್ರದೇಶ, ಪಂಜಾಬ್, ಹರಿಯಾಣ ಮತ್ತು ದೆಹಲಿಯ ಹಲವು ಭಾಗಗಳಲ್ಲಿ ಹಾಗೂ ಜಮ್ಮು-ಕಾಶ್ಮೀರ, ಮಧ್ಯಪ್ರದೇಶ, ಆಂಧ್ರ ಪ್ರದೇಶ, ರಾಜಸ್ಥಾನ, ವಿದರ್ಭ ಮತ್ತು ಪಶ್ಚಿಮ ಬಂಗಾಳದ ಕೆಲವು ಭಾಗಗಳಲ್ಲಿ ತಾಪಮಾನ ಏರಿಕೆಯಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.  ಇಂದು ಅರುಣಾಚಲ ಪ್ರದೇಶದಲ್ಲಿ ಧಾರಾಕಾರ ಮಳೆಯಾಗಿದೆ. ಪಾಪಮ್ ಪಾರೆ ಮತ್ತು ಕುರುಂಗ್ ಕುಮೆಯ್ ಜಿಲ್ಲೆಗಳಲ್ಲಿ ರೆಡ್ ಅಲರ್ಟ್ ಘೋಷಿಸಲಾಗಿದೆ. ಇದೇ ವೇಳೆ ರಾಜ್ಯದ ೯ ಜಿಲ್ಲೆಗಳಲ್ಲಿ ಹವಾಮಾನ ಇಲಾಖೆ ಆರೆಂಜ್ ಅಲರ್ಟ್ ಘೋಷಿಸಿದೆ. ಮತ್ತೊಂದೆಡೆ, ಮುಂದಿನ ಎರಡು ದಿನಗಳಲ್ಲಿ ಪಶ್ಚಿಮ ಬಂಗಾಳ, ಅಸ್ಸಾಂ, ಮೇಘಾಲಯದಲ್ಲಿ ಧಾರಾಕಾರ ಮಳೆಯಾಗಲಿದೆ. ಮುಂದಿನ ಐದು ದಿನಗಳಲ್ಲಿ ಅರುಣಾಚಲ ಪ್ರದೇಶ, ಅಸ್ಸಾಂ, ಮಿಜೋರಾಂ, ನಾಗಾಲ್ಯಾಂಡ್, ಮಣಿಪುರ ಮತ್ತು ತ್ರಿಪುರದಲ್ಲಿ ಸಾಧಾರಣ ಮಳೆಯಾಗುವ ಸಾಧ್ಯತೆಯಿದೆ ಎಂದು ಇಲಾಖೆ ತಿಳಿಸಿದೆ.

<><*<><>*><>

ಮುಂಬೈ ಷೇರು ಮಾರುಕಟ್ಟೆಯಲ್ಲಿಂದು ಷೇರು ಸಂವೇದಿ ಸೂಚ್ಯಂಕ- ಸೆನ್ಸೆಕ್ಸ್ ೩೦೮ ಅಂಕಗಳು ಏರಿಕೆಯಾಗಿದ್ದು, ದಿನದ ಅಂತ್ಯಕ್ಕೆ ೭೭ ಸಾವಿರದ ೩೦೧ ಅಂಕಗಳು ದಾಖಲಾಗಿದೆ. ಅದೇ ರೀತಿ ರಾಷ್ಟ್ರೀಯ ಸಂವೇದಿ ಸೂಚ್ಯಂಕ- ನಿಫ್ಟಿ, ೯೨ ಅಂಕಗಳು ಏರಿಕೆ ಕಂಡಿದ್ದು, ದಿನದ ಅಂತ್ಯಕ್ಕೆ ೨೩ ಸಾವಿರದ ೫೫೮ ಅಂಕಗಳು ದಾಖಲಾಗಿದೆ. ಡಾಲರ್ ಎದುರು ರೂಪಾಯಿ ಮೌಲ್ಯ ೮೩ ರೂಪಾಯಿ ೪೧ ಪೈಸೆಯಷ್ಟಾಗಿದೆ.

<><*<><>*><>

ಚೀನಾದ ಗುವಾಂಗ್‌ಡಾಂಗ್ ಪ್ರಾಂತ್ಯದಲ್ಲಿ ಧಾರಾಕಾರ ಮಳೆಯಿಂದ ಉಂಟಾದ ಭೂಕುಸಿತದಿಂದಾಗಿ ಐವರು ಸಾವನ್ನಪ್ಪಿದ್ದು, ೧೫ ಮಂದಿ ನಾಪತ್ತೆಯಾಗಿದ್ದಾರೆ. ವರದಿಗಳ ಪ್ರಕಾರ, ಮೀಝೌ ಪ್ರಾಂತ್ಯದ ಹಲವು ಭಾಗಗಳಲ್ಲಿ ಭಾರೀ ಮಳೆಯಾಗಿದ್ದು, ಇದುವರೆಗೆ ಹದಿಮೂರು ಜನರು ಸಿಕ್ಕಿಬಿದ್ದಿದ್ದಾರೆ ಎಂದು ವರದಿಯಾಗಿದೆ. ಚೀನಾದಾದ್ಯಂತ ವಾರಗಳಿಂದ ಮುಂದುವರೆದಿದ್ದ ಪ್ರತಿಕೂಲ ಹವಾಮಾನ ಪರಿಸ್ಥಿಯ ನಂತರ, ಗುವಾಂಗ್‌ಡಾಂಗ್ ಪ್ರಾಂತ್ಯದ ಕೆಲವು ಭಾಗಗಳಲ್ಲಿ ಧಾರಾಕಾರ ಮಳೆ ಸುರಿದಿದೆ. ೧೦ ಸಾವಿರಕ್ಕೂ ಹೆಚ್ಚು ತುರ್ತು ನಿರ್ವಹಣೆ ಸಿಬ್ಬಂದಿಯನ್ನು ಪೀಡಿತ ಪ್ರದೇಶಗಳಿಗೆ ಶೋಧ ಮತ್ತು ರಕ್ಷಣಾ ಕಾರ್ಯಗಳಿಗೆ ನಿಯೋಜಿಸಲಾಗಿದೆ ಎಂದು ಸ್ಥಳೀಯ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

<><*<><>*><>

ಭಾರತದ ಗ್ರ್ಯಾಂಡ್ ಮಾಸ್ಟರ್ ಅರ್ಜುನ್ ಎರಿಗಾಸಿ ಅವರು, ಸ್ಟೆಫನ್ ಅವಗ್ಯಾನ್ ಸ್ಮಾರಕ-೨೦೨೪, ಕಿರೀಟವನ್ನು ತಮ್ಮ ಮುಡಿಗೇರಿಸಿಕೊಂಡಿದ್ದಾರೆ. ಅರ್ಮೇನಿಯಾದ ಜೆರ್ಮುಕ್‌ನಲ್ಲಿ ನಡೆದ ಚೆಸ್ ಪಂದ್ಯಾವಳಿಯಲ್ಲಿ ತೆಲಂಗಾಣದ ೨೦ ವರ್ಷದ ಚೆಸ್ ಆಟಗಾರ ಅರ್ಜುನ್ ಅವರು, ೧ ಸುತ್ತು ಬಾಕಿ ಇರುವಾಗಲೇ, ರಷ್ಯಾದ ಗ್ರ್ಯಾಂಡ್ ಮಾಸ್ಟರ್ ವೊಲೋಡರ್ ಮುರ್ಜಿನ್ ಅವರನ್ನು ಪರಾಭವಗೊಳಿಸಿದ್ದಾರೆ. ಪಂದ್ಯಾವಳಿಯ ಅಂತಿಮ ಪಂದ್ಯದಲ್ಲಿ ಅರ್ಜುನ್ ಎರಿಗಾಸಿಯವರು ಅರ್ಮೇನಿಯಾದ ಗ್ರ್ಯಾಂಡ್ ಮಾಸ್ಟರ್ ಮ್ಯಾನ್ಯುಯಲ್ ಪೆಟ್ರೋಸ್ಯಾನ್ ಅವರನ್ನು ಎದುರಿಸಲಿದ್ದಾರೆ.

<><*<><>*><>

ಫಿನ್‌ಲ್ಯಾಂಡ್‌ನ ತುರ್ಕುದಲ್ಲಿರುವ ಪಾವೊ ನೂರ್ಮಿ ಕ್ರೀಡಾಂಗಣದಲ್ಲಿಂದು ನಡೆಯಲಿರುವ ವಿಶ್ವ ಅಥ್ಲೆಟಿಕ್ಸ್ ಕಾಂಟಿನೆಂಟಲ್ ಗೋಲ್ಡ್ ಚಾಂಪಿಯನ್‌ಶಿಪ್‌ನಲ್ಲಿ ಒಲಿಂಪಿಕ್ ಪದಕ ವಿಜೇತ ಭಾರತದ ಜಾವೆಲಿನ್ ಪಟು ನೀರಜ್ ಚೋಪ್ರಾ ಭಾಗವಹಿಸಲಿದ್ದಾರೆ.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ನಾಳೆ ಬೆಳಗ್ಗೆ ೭.೦೫ ಕ್ಕೆ <>*><>